# ನಾವೀನ್ಯತೆ, ಉದ್ಯಶೀಲತೆ ಕುರಿತು ಕಾರ್ಯಗಾರ

**ಕೊಂಕಣವಾಹಿನಿ ನ್ಯೂಸ್,**

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ "ನಾವೀನ್ಯತೆ ಹಾಗೂ ಉದ್ಯಮಶೀಲತೆ ಮುಖಾಂತರ ಮಹಿಳಾ ಸಬಲೀಕರಣ" ಕುರಿತಾಗಿ ಒಂದು ದಿನದ ಕಾರ್ಯಾಗಾರವನ್ನು ಗುರುವಾರ ಆಯೋಜಿಸಲಾಗಿತ್ತು.

ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಬೆಳಗಾವಿಯ "ದತ್ತಾಂಶ" ಸಂಸ್ಥೆಯ ಸಂಸ್ಥಾಪಕಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಚೇತನಾ ಸಾರಂಗ್ ಆಗಮಿಸಿದ್ದರು. ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಮಹಿಳೆಯರಿಗೆ ಇಂದು ವಿಫುಲ ಅವಕಾಶಗಳಿದ್ದು ಸದುಪಯೋಗಪಡಿಸಿಕೊಳ್ಳುವಂತೆ ವಿದ್ಯಾರ್ಥಿನಿಯರಿಗೆ ಕರೆ ನೀಡಿದರು. ಹೊಸ ಆವಿಷ್ಕಾರ ಹಾಗೂ ಉದ್ಯಮಶೀಲತೆಯಿಂದ ಮಹಿಳಾ ಸಬಲೀಕರಣ ಸಾಧ್ಯವೆಂದು ಹೇಳಿದರು. ಮಹಿಳೆಯರು ಇಂದು ಎಲ್ಲಾ ಕ್ಷೇತ್ರದಲ್ಲಿಯೂ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು , ಉದ್ಯಮ ಕ್ಷೇತ್ರದಲ್ಲಿ ಮಹಿಳೆಯರ ಸಾಧನೆಯನ್ನು ಉದಾರಣೆ ಸಹಿತ ವಿವರಿಸಿದರು. ಯಶಸ್ವಿ ಉದ್ಯಮಿಯಾಗಲು ಅನುಸರಿಸ ಬೇಕಾದ ಮಾರ್ಗಗಳ ಕುರಿತು ವಿವರಿಸಿದರು. ತಾವು ಬೆಳೆದು ಬಂದ ದಾರಿಯ ಬಗ್ಗೆ ಅನುಭವ ಹಂಚಿಕೊಂಡರು.




ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಹಾವಿದ್ಯಾಲಯದ ಐಇಇಇ ಸಂಚಾಲಕ ಡಾ. ಅರುಣ್ ಕಾಖಂಡಕಿ ಹಾಗೂ ಪ್ರೊ. ಸೂರಜ್ ಕಡ್ಲಿ ಕಾರ್ಯಕ್ರಮ ಸಂಯೋಜಿಸಿದ್ದರು. ಐ ಇ ಇ ಇ ವಿದ್ಯಾರ್ಥಿ ವಿಭಾಗದ ಪದಾಧಿಕಾರಿ ಹರೀಶ್ ಹೆರಾಲ್ಗಿ ವಂದಿಸಿದರು. ಕುಮಾರಿ ಸಂಜನಾ ಸ್ವಾಗತಿಸಿ ನಿರೂಪಿಸಿದರು. ಈ ಕಾರ್ಯಕ್ರಮದಲ್ಲಿ ಎಲ್ಲಾ ವಿಭಾಗದ ಡೀನ್ ಗಳು, ವಿಭಾಗ ಮುಖ್ಯಸ್ಥರು ಹಾಗೂ ಎರಡು ನೂರಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಹೊಸ ಆವಿಷ್ಕಾರದಿಂದ ಮಹಿಳಾ ಸಬಲೀಕರಣ




**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ನಾವಿನ್ಯತೆ ಹಾಗೂ ಉದ್ಯಮಶೀಲತೆ ಮುಖಾಂತರ ಮಹಿಳಾ ಸಬಲೀಕರಣ ಕುರಿತಾಗಿ ಒಂದು ದಿನದ ಕಾರ್ಯಾಗಾರ ಆಯೋಜಿಸಲಾಗಿತ್ತು.

ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಬೆಳಗಾವಿಯ ದತ್ತಾಂಶ ಸಂಸ್ಥೆಯ ಸಂಸ್ಥಾಪಕಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಚೇತನಾ ಸಾರಂಗ್ ಆಗಮಿಸಿ ಮಾತನಾಡಿ, ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಮಹಿಳೆಯರಿಗೆ ಇಂದು ವಿಫುಲ ಅವಕಾಶಗಳಿದ್ದು, ಸದುಪಯೋಗಪಡಿಸಿ ಕೊಳ್ಳುವಂತೆ ವಿದ್ಯಾರ್ಥಿನಿಯರಿಗೆ ಕರೆ ನೀಡಿದ ಅವರು, ಹೊಸ ಆವಿಷ್ಕಾರ ಹಾಗೂ ಉದ್ಯಮಶೀಲತೆಯಿಂದ ಮಹಿಳಾ ಸಬಲೀಕರಣ ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ, ನೂತನ ತಂತ್ರಜ್ಞಾನದ ಅರಿವು ಹೊಂದಿ ಹೊಸ ಆವಿಷ್ಕಾರಗಳೊಂದಿಗೆ ಔದ್ಯಮಿಕ ಕ್ಷೇತ್ರದಲ್ಲಿ ಸಾಧನೆಗೈಯುವಂತೆ ಕರೆ ನೀಡಿದರು.

ಮಹಾವಿದ್ಯಾಲಯದ ಐಇಇಇ ಸಂಚಾಲಕ ಡಾ. ಅರುಣ್ ಕಾಖಂಡಕಿ ಹಾಗೂ ಪ್ರೊ. ಸೂರಜ್ ಕಡ್ಲಿಕಾರ್ಯಕ್ರಮಸಂಯೋಜಿಸಿದ್ದರು. ಐಇಇಇ ವಿದ್ಯಾರ್ಥಿ ವಿಭಾಗದ ಪದಾಧಿಕಾರಿ ಹರೀಶ್ ಹೆರಾಲ್ಗಿ ವಂದಿಸಿದರು. ಸಂಜನಾ ಸ್ವಾಗತಿಸಿ, ನಿರೂಪಿಸಿದರು. ಐಇಇಇ ವಿದ್ಯಾರ್ಥಿ ಘಟಕದ ಅಡಿಯಲ್ಲಿ ಮತ್ತು ಮಂಗಳೂರು ಉಪವಿಭಾಗದ ಪ್ರಾಯೋಜಕತ್ವದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.